ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

**D. DEVARAJ URS BACKWARD CLASSES DEVELOPMENT CORPORATION**

(ಕರ್ನಾಟಕ ಸರ್ಕಾರದ ಉದ್ಯಮ) (A Government of Karnataka Undertaking)

ಕ್ರಮಾಂಕ / No.: ಸಂಖ್ಯೆ: ದೇಹಿನಿ/ಸ/ಕ್ರಿಯೋ/ಸಿಆರ್-6/2022-23

ದಿನಾಂಕ / Dated: ದಿನಾಂಕ: 05-09-2022

## ಪ್ರಕಟಣೆ

**<u>2022-23ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸೌಲಭ್ಯ ಒದಗಿಸಲು ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ.</u>**

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಒಳಪಡುವ ಹಿಂದುಳಿದ ವರ್ಗಗಳ <u>ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸೌಲಭ್ಯ ಒದಗಿಸಲು</u> ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಬಯಸುವ ಫಲಾಪೇಕ್ಷಿಗಳು **ದಿನಾಂಕ:06-09-2022 ರಿಂದ 20-10-2022ರವರೆಗೆ** ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ.

- ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿದಾರರು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕು.

1. **ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಒಳಪಡುವ** ಜಾತಿ/ಸಮುದಾಯಗಳಿಗೆ ಸೇರಿದ **ಸಣ್ಣ ಮತ್ತು ಅತಿ ಸಣ್ಣ ರೈತರಾಗಿದ್ದು ಹಾಲಿ ಜಮೀನುಗಳು ಖುಷ್ಕಿಯಾಗಿದ್ದು ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿರಬಾರದು.**
2. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
3. ಅರ್ಜಿದಾರರ ವಯಸ್ಸು 18 ರಿಂದ 60 ವರ್ಷದ ಒಳಗಿರಬೇಕು.
4. ಅರ್ಜಿದಾರರ ಕುಟುಂಬ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಒಳಗಿರಬೇಕು.
5. ಅರ್ಜಿದಾರರು ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಕನಿಷ್ಠ 02 ಎಕರೆ ಜಮೀನು ಹೊಂದಿರಬೇಕು. ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 01 ಎಕರೆ ಜಮೀನು ಹೊಂದಿರಬೇಕು.
6. ವೈಯಕ್ತಿಕ ಕೊಳವೆ ಬಾವಿ ಯೋಜನೆಯಲ್ಲಿ ಘಟಕ ವೆಚ್ಚ ರೂ.2.50 ಲಕ್ಷಗಳು, ಇದರಲ್ಲಿ ರೂ.2.00ಲಕ್ಷ ಸಹಾಯಧನ ಹಾಗೂ ರೂ.50,000/- ನಿಗಮದಿಂದ ಶೇ.4ರ ಬಡ್ಡಿದರದಲ್ಲಿ ನೀಡುವ ಸಾಲದ ಮೊತ್ತ ಒಳಗೊಂಡಿದೆ.

ನಂ. 16-ಡಿ, 4ನೇ ಮಹಡಿ, ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಏರಿಯಾ, ವಸಂತನಗರ, ಬೆಂಗಳೂರು-52. # 16-D, 4th Floor, Devaraj Urs Bhavan, Millers Tank Bund Area, Vasanthanagar, Bangalore-52.
Ph: 080 - 22374832, 22374834 Fax: 080 - 22374833. E-mail: md.dbcdc@gmail.com Visit at: www.karnataka.gov.in/dbcdc

7. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳಿಗೆ ವೈಯಕ್ತಿಕ ಕೊಳವೆ ಬಾವಿ ಘಟಕ ವೆಚ್ಚ ರೂ.4.00ಲಕ್ಷಗಳು ಇದರಲ್ಲಿ ರೂ.3.50ಲಕ್ಷ ಸಹಾಯಧನ ಹಾಗೂ ರೂ.50,000/- ನಿಗಮದಿಂದ ಶೇ.4ರ ಬಡ್ಡಿದರದಲ್ಲಿ ನೀಡುವ ಸಾಲದ ಮೊತ್ತ ಒಳಗೊಂಡಿದೆ.
8. ರೈತರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ರೈತರ ಹೆಸರು,(ಶ್ರೀ/ಶ್ರೀಮತಿ, ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಬ್ಯಾಂಕ್ ಖಾತೆಯ ಪುಸ್ತಕದಲ್ಲಿಯೂ ಇದ್ದು, ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ,ದಲ್ಲಿಯೂ ಆಧಾರ್‌ಕಾರ್ಡ್‌ನಲ್ಲಿರುವಂತೆ ಹೆಸರು ಹೊಂದಾಣಿಕೆಯಾಗಬೇಕು.
9. ಈ ಹಿಂದೆ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.
10. ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದhttps://www.dbcdc.karnataka.gov.in ವೆಬ್‌ಸೈಟ್ ನಲ್ಲಿ ಸಂಪರ್ಕಿಸಿ ಅಥವಾ ನಿಗಮದ ದೂರವಾಣಿ/ ಸಹಾಯವಾಣಿ ಸಂಖ್ಯೆ080-22374832 ಮತ್ತು 9606066389 ಅಥವಾ 8824300400 ಸಂಪರ್ಕಿಸುವುದು.

ವಿ.ರವಿ.
ವ್ಯವಸ್ಥಾಪಕ ನಿರ್ದೇಶಕರು